**ಶ್ರೀ ಗೋವಿಂದರಾಜು, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು, ಕರ್ನಾಟಕ ವಿಧಾನ ಪರಿಷತ್ತು ಇವರು ಬಿತ್ತನೆ ಬೀಜ ವಿತರಣೆ ಬಗ್ಗೆ ನಿಯಮ 72 ರಡಿ ಗಮನ ಸೆಳೆಯುವ ಸೂಚನೆಗೆ ಮಾಹಿತಿ.**

**ಪ್ರಶ್ನೆ:**

ರಾಜ್ಯದಲ್ಲಿ ಉತ್ತಮ ಮಳೆಯಾಗಿರುವುದರಿಂದ ಮುಂಗಾರು ಪ್ರಾರಂಭದಲ್ಲೇ ಜಮೀನು ಹದಗೊಳಿಸಿರುವ ರೈತರಿಗೆ ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜ ದೊರೆಯದಿರುವುದು ಬಿತ್ತನೆ ಕಾರ್ಯಕ್ಕೆ ಹಿನ್ನಡೆಯಾಗಿದೆ. ರಾಜ್ಯಕ್ಕೆ ಮುಂಗಾರು ಆಗಮಿಸುವ ಮುನ್ನವೇ ಕೃಷಿ ಇಲಾಖೆ ಬಿತ್ತನೆ ಬೀಜ ಮತ್ತು ರಸಗೊಬ್ಬರ ನೀಡಲು ಸಿದ್ಧತೆ ನಡೆಸಿತ್ತು. ರಾಜ್ಯದ ಪ್ರತಿಯೊಂದು ರೈತ ಸಂಪರ್ಕ ಕೇಂದ್ರದಲ್ಲಿ 'ಕ್ಯೂಆರ್ ಕೋಡ್' ಸ್ಕ್ಯಾನ್ ಮಾಡುವ ಮೂಲಕ ಬಿತ್ತನೆ ಬೀಜ ವಿತರಿಸಬೇಕು, ಎಂದು ಆದೇಶ ಹೊರಡಿಸಿತ್ತು. ಆದರೆ ತಾಂತ್ರಿಕ ಸಮಸ್ಯೆಯಿಂದಾಗಿ 'ಕ್ಯೂಆರ್ ಕೋಡ್' ಆಗದೇ ಬಿತ್ತನೆ ಬೀಜ ವಿತರಿಸಲಾಗುತ್ತಿಲ್ಲ. ರೈತರು ದಿನವಿಡೀ ಸರತಿ ಸಾಲಿನಲ್ಲಿ ನಿಂತರೂ ಬಿತ್ತನೆ ಬೀಜ ದೊರೆಯದಿರುವುದಕ್ಕೆ ರೈತರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ರೈತರ ಹಿತದೃಷ್ಟಿಯಿಂದ ಈ ವಿಷಯವನ್ನು ಮಾನ್ಯ ಕೃಷಿ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

**ಉತ್ತರ:**

2023ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ರಾಜ್ಯ ಸರ್ಕಾರದ ಬೀಜಗಳ ಪೂರೈಕೆ ಯೋಜನೆಯಡಿ 82.35 ಲಕ್ಷ ಹೆಕ್ಟೇರು ಪ್ರದೇಶದಲ್ಲಿ ಬಿತ್ತನೆ ಕೈಗೊಳ್ಳುವ ಗುರಿ ಇದ್ದು, 5.54ಲಕ್ಷ ಕ್ವಿಂಟಾಲ್ ಬಿತ್ತನೆ ಬೀಜಗಳ ಬೇಡಿಕೆಗೆ, 6.12 ಲಕ್ಷ ಕ್ವಿಂಟಾಲ್ ಬಿತ್ತನೆ ಬೀಜಗಳು ಲಭ್ಯವಿದ್ದು, ರಾಜ್ಯಾದ್ಯಂತ ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರಗಳು, ಹೆಚ್ಚುವರಿ ಮಾರಾಟ ಕೇಂದ್ರಗಳು ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ QR Code ಬಳಸಿ ಬೀಜ ವಿತರಣೆ ಮಾಡಲು ವ್ಯವಸ್ಥೆ ಮಾಡಲಾಗಿರುತ್ತದೆ.

ಕೃಷಿ ಪರಿಕರಗಳ ವಿತರಣೆಯಲ್ಲಿ ಪಾರದರ್ಶಕತೆ ತರುವ ಮುಖ್ಯ ಉದ್ದೇಶದಿಂದ ಪ್ರಸ್ತುತ ಸಾಲಿನಿಂದ ಕೃಷಿ ಪರಿಕರಗಳ ವಿತರಣೆಗೆ QR Code ಕಡ್ಡಾಯಗೊಳಿಸಲಾಗಿರುತ್ತದೆ. ಅದರಂತೆ ಹಂಗಾಮು ಪೂರ್ವದಿಂದಲೇ QR Code ಅನುಷ್ಠಾನಕ್ಕಾಗಿ ಅವಶ್ಯವಿರುವ ಎಲ್ಲಾ ಮುಂಜಾಗ್ರತಾ ವ್ಯವಸ್ಥೆಗಳನ್ನು ಕೈಗೊಳ್ಳಲಾಗಿದ್ದು, ದಿನಾಂಕ 13.04.2023ರಿಂದ QR Code ಬಳಸಿ ಬಿತ್ತನೆ ಬೀಜ ವಿತರಣೆಗೆ ಅನುಮೋದನೆ ನೀಡಲಾಗಿರುತ್ತದೆ.

..2

ಪೂರ್ವ ಮುಂಗಾರು ಹಂತದಲ್ಲಿ QR Code ಅನುಷ್ಠಾನದಿಂದಾಗಿ ರೈತ ಸಂಪರ್ಕ ಕೇಂದ್ರಗಳಲ್ಲಿ ಸಣ್ಣ ಪುಟ್ಟ ತಾಂತ್ರಿಕ ಸಮಸ್ಯೆ ಉದ್ಭವಿಸಿದ್ದು ಆ ಕೂಡಲೇ ಅದನ್ನು ಸರಿಪಡಿಸಲಾಗಿರುತ್ತದೆ. ಅಲ್ಲದೆ QR Code ಅನುಷ್ಠಾನದ ವೇಳೆ ಸಮಸ್ಯೆ ಉದ್ಭವಿಸಿದಲ್ಲಿ ಅಥವಾ ರೈತರ ಸಂಖ್ಯೆ ಹೆಚ್ಚಾದಾಗ QR Code ಬಳಸದೇ Offline ಮೂಲಕ ಪರ್ಯಾಯವಾಗಿ ಬೀಜ ವಿತರಣೆ ಮಾಡಲು ಸಹ ಅವಕಾಶ ಕಲ್ಪಿಸಲಾಗಿರುತ್ತದೆ. ಆದುದರಿಂದ ಬಿತ್ತನೆ ಬೀಜ ವಿತರಣೆಯಲ್ಲಿ ಯಾವುದೇ ರೀತಿಯ ಅಡಚಣೆಯಾಗಿರುವುದಿಲ್ಲ.

ಈಗಾಗಲೇ 2023ರ ಮುಂಗಾರು ಹಂಗಾಮಿನಲ್ಲಿ QR Code ಬಳಸಿ, ದಿನಾಂಕ: 03.07.2023 ರವರೆಗೆ ಒಟ್ಟು 1,89,797 ಕ್ವಿಂಟಾಲ್ ಗಳಷ್ಟು ಬಿತ್ತನೆ ಬೀಜಗಳನ್ನು ವಿತರಣೆ ಮಾಡಲಾಗಿದ್ದು, 1,11,719 ಕ್ವಿಂಟಾಲ್ ಗಳಷ್ಟು ಬಿತ್ತನೆ ಬೀಜ ದಾಸ್ತಾನು ರೈತ ಸಂಪರ್ಕ ಕೇಂದ್ರಗಳಲ್ಲಿ ಲಭ್ಯವಿರುತ್ತದೆ ಹಾಗೂ ಯಾವುದೇ ಬಿತ್ತನೆ ಬೀಜದ ಕೊರತೆಯಿರುವುದಿಲ್ಲ. ರಾಜ್ಯದಲ್ಲಿ ಬಿತ್ತನೆ ಬೀಜ ವಿತರಣೆ ಕಾರ್ಯ ಪ್ರಗತಿಯಲ್ಲಿದೆ.

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು

ಸಂಖ್ಯೆ: AGRI/96/ACT/2023